## ಹಿರಿಯ ಸಿವಿಲ್  ಜಡ್ಜ್ ಮತ್ತು ಪ್ರ ದ ನ್ಯಾದಂ.ರವರ ನ್ಯಾಯಾಲಯ, ಹೆಚ್.ಡಿ.ಕೋಟೆ

**ಸಿ.ಸಿ.ನಂ. 2565/2022**

ಫಿರ್ಯಾದಿ : ಸರ್ಕಾರದ ಪರವಾಗಿ ಹೆಚ್.ಡಿ.ಕೋಟೆ.
ಪೋಲೀಸ್ ಠಾಣೆ

-ವಿರುದ್ಧ-

ಆರೋಪಿಗಳು : 1. ಮಹದೇವಪ್ಪ
ಬಿನ್ ಕೂಸಪ್ಪ,
ವಯಸ್ಸು ಸುಮಾರು 75 ವರ್ಷ,
ವಾಸಃ ಅಣ್ಣೂರು ಹೊಸಹಳ್ಳಿ ಗ್ರಾಮ
ಹೆಚ್.ಡಿ.ಕೋಟೆ ತಾಲು್ಲೂಕು, ಮೈಸೂರು ಜಿಲ್ಲೆ.

2. ಸರ್ವಮಂಗಳ
ಬಿನ್ ಮಹದೇವಪ್ಪ,
**(ಮೃತಪಟ್ಟಿರುತ್ತಾರೆ)**

## ದೋಷಾರೋಪಣೆ

ಶ್ರೀ ಸಂದೇಶ್ ಪ್ರಭು. ಬಿ., ಬಿ.ಎ(ಲಾ)., ಎಲ್‌ಎಲ್.ಬಿ., ಪಿ ಜಿ ಡಿ ಹೆಚ್ ಆರ್ ಎಂ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ಹೆಚ್.ಡಿ.ಕೋಟೆ ಆದ ನಾನು ಆರೋಪಿತರಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕ 10.10.2021 ರಂದು ಬೆಳಿಗ್ಗೆ 06.00 ಗಂಟೆ ಸಮಯದಲ್ಲಿ ಹೆಚ್.ಡಿ. ಕೋಟೆ ತಾಲ್ಲೂಕು ಅಣ್ಣೂರು ಹೋಸಹಳ್ಳಿ ಗ್ರಾಮದಲ್ಲಿ ಚಾಸಾ-01 ಮತ್ತು 04 ರವರುಗಳು ವಾಸಮಾಡುವ ಮನೆಯ ಹತ್ತಿರ ಇರುವಾಗ ಮೇಲ್ಕಂಡ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-01 ರವರೊಂದಿಗೆ ಮೋಟಾರ್ ಸೈಕಲ್ ವಿಚಾರದಲ್ಲಿ ಕೂಗಾಡುತ್ತಿದ್ದು, ಚಾಸಾ 01 ಮತ್ತು 02 ರವರುಗಳು "ಏಕೆ ಕೂಗಾಡುತ್ತಿದ್ದೀರಿ," ಎಂದು ಕೇಳಲಾಗಿ. ಚಾಸಾ 01 ರವರಿಗೆ "ನೀನು ನಮ್ಮ ಮನೆಗೆ ಬಂದು ಕೆಲಸ ಮಾಡು, ಹಾಗೂ ನನ್ನ ಮಗನ ಮೊಟಾರ್ ಸೈಕಲ್ ಅನ್ನು ಕೊಡು, ನಿಮ್ಮ ಅಪ್ಪನ ಮನೆಯಲ್ಲಿ ಏಕೆ ಇದ್ದೀಯಾ. ನಮ್ಮನ್ನು ದುಡಿದು ಸಾಕುವಾರು ಯಾರು" ಎಂದು ಮುಂದಕ್ಕೆ ಹೋಗದಂತೆ ತಡೆದು, ಆ

ಮೂಲಕ ನೀವು ಭಾ.ದಂ.ಸಂ. ಕಲಂ.341 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ

ಎರಡನೆಯದಾಗಿ, ಅದೇ ದಿನ, ಅದೇ ಸಮಯ, ಅದೇ ಸ್ಥಳದಲ್ಲಿ ಮೇಲ್ಕಂಡ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-01 ರವರಿಗೆ "ಹಲ್ಕಮುಂಡೆ, ಕತ್ತೆಮುಂಡಿ, ಅಂತ ಮುಂಡೆ" ಎಂದು ಬಾಯಿಗೆ ಬಂದಂತೆ ಅವಾಚ್ಯ ಶಬ್ದಗಳಿಂದ ಬೈದು ಆ ಮೂಲಕ ಚಾಸಾ-1 ರವರಿಗೆ ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಅವರು ಶಾಂತಿ ಭಂಗವನ್ನು ಉಂಟು ಮಾಡಲೆಂಬ ಅಥವಾ ಯಾವುದೇ ಅಪರಾಧವನ್ನು ಮಾಡಬೇಕೆಂಬ ಉದ್ದೇಶದಿಂದ ಅವರನ್ನು ಅವಮಾನ ಪಡಿಸಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾ.ದಂ.ಸಂ.ಕಲಂ 504 ಸಹವಾಚಕ 34 ರಂತೆ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ

ಮೂರನೆಯದಾಗಿ, ಅದೇ ದಿನ, ಅದೇ ಸಮಯ, ಅದೇ ಸ್ಥಳದಲ್ಲಿ ಮೇಲ್ಕಂಡ ಆರೋಪಿಯಾದ ನೀವು ಸಮಾನ ಉದ್ದೇಶದಿಂದ ಚಾಸಾ 01 ರವರ ತಲೆಯ ಜುಟ್ಟನ್ನು ಹಿಡಿದು ಎಳೆದಾಡಿ ಕೆಳಗೆ ಕೆಡವಿಕೊಂಡು ಕಾಲಿನಿಂದ ಹೊಟ್ಟೆಗೆ ಒದ್ದು ನೋವುಂಟು ನೋವುಂಟು ಮಾಡಿ, ಆ ಮೂಲಕ ಆರೋಪಿಯಾದ ನೀವು ಭಾ.ದಂ.ಸಂ. ಕಲಂ. 323 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ.

ನಾಲ್ಕನೆಯದಾಗಿ, ಅದೇ ದಿನ, ಅದೇ ಸಮಯ, ಅದೇ ಸ್ಥಳದಲ್ಲಿ ಮೇಲ್ಕಂಡ ಆರೋಪಿಯಾದ ನೀವು ಸಮಾನ ಉದ್ದೇಶದಿಂದ ದೊಣ್ಣೆಯಿಂದ ಚಾಸಾ-01 ರವರಿಗೆ ಮೈಕೈಗೆ ಹೊಡೆದು ಸಾಮಾನ್ಯ ಸ್ವರೂಪದ ಘಾಯ ಉಂಟು ಮಾಡಿ, ಆ ಮೂಲಕ ಆರೋಪಿಯಾದ ನೀವು ಭಾ.ದಂ.ಸಂ. ಕಲಂ. 324 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ.

ಕೊನೆಯದಾಗಿ, ಅದೇ ದಿನ, ಅದೇ ಸಮಯ, ಅದೇ ಸ್ಥಳದಲ್ಲಿ ಮೇಲ್ಕಂಡ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ 01 ಮತ್ತು ಚಾಸಾ 04 ರವರುಗಳಿಗೆ "ಮುಂದೆ ಯಾವತ್ತಾದರು, ಒಂದು ದಿನ ನಿಮ್ಮ ಮನೆಗೆ ಸೀಮೆಎಣ್ಣೆ ಹಚ್ಚಿ ಕೊಲೆ ಮಾಡದೆ ಬಿಡುವುದಿಲ್ಲ," ಎಂದು ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ಚಾಸಾ-1 ಮತ್ತು ಚಾಸಾ 04 ರವರು ಹೆದರುವಂತೆ ಮಾಡಿ ಅವರು ಕಾನೂನು ಸಮ್ಮತವಾಗಿ ಮಾಡಬೇಕಾಗಿರುವ ಕೃತ್ಯವನ್ನು ಮಾಡದಂತೆ ಅಥವಾ ಕಾನೂನು ಸಮ್ಮತವಾಗಿ ಮಾಡಬಾರದ ಕೃತ್ಯವನ್ನು ಮಾಡುವಂತೆ ಅಪಾಯದ ಭೀತಿಯನ್ನು ಹುಟ್ಟಿಸಿ ಅಪರಾಧಿಕ ಭಯೋತ್ಪಾದನೆಯನ್ನು ಉಂಟು

ಮಾಡಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾ.ದಂ.ಸಂ.ಕಲಂ 506 ಸಹವಾಚಕ 34 ರಂತೆ ಶಿಕ್ಷಾರ್ಹ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ.

ದಿನಾಂಕಃ

(ಸಂದೇಶ್ ಪ್ರಭು. ಬಿ.)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹೆಚ್ ಡಿ ಕೋಟೆ

**ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರ ದ ನ್ಯಾದಂ.ರವರ ನ್ಯಾಯಾಲಯ, ಹೆಚ್.ಡಿ.ಕೋಟೆ**

**ಸಿ.ಸಿ.ನಂ. 2565/2022**

ಫಿರ್ಯಾದಿ : ಸರ್ಕಾರದ ಪರವಾಗಿ ಹೆಚ್.ಡಿ.ಕೋಟೆ.
ಪೋಲೀಸ್ ಠಾಣೆ

–ವಿರುದ್ಧ–

ಆರೋಪಿಗಳು : 1. ಮಹದೇವಪ್ಪ
ಬಿನ್ ಕೂಸಪ್ಪ,
ವಯಸ್ಸು ಸುಮಾರು 75 ವರ್ಷ,
ವಾಸಃ ಅಣ್ಣೂರು ಹೊಸಹಳ್ಳಿ ಗ್ರಾಮ
ಹೆಚ್.ಡಿ.ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ.

**ಆರೋಪಿಯ ಹೇಳಿಕೆ**

ಈ ಮೇಲಿನ ದೋಷಾರೋಪಣೆಗಳಿಗಾಗಿ ಆರೋಪಿತರಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದೆಂದು ನಿರ್ದೇಶಿಸಿರುತ್ತೇನೆ.

ಪ್ರಶ್ನೆ : ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿದ್ದೀರಾ?

ಉತ್ತರ

ಪ್ರಶ್ನೆ : ಈ ದೋಷಾರೋಪಣೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗ ಬೇಕೆನ್ನುವಿರೋ?

ಉತ್ತರ

(ಆರೋಪಿತರಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿತರು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ

SANDESH PRABHU B
Digitally signed by SANDESH PRABHU B
Date: 2024.08.05 16:32:24 +0530

(ಸಂದೇಶ್ ಪ್ರಭು. ಬಿ.)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹೆಚ್ ಡಿ ಕೋಟೆ